# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್/26/:2021-22 ದಿನಾಂಕ: 20.11.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.20.11.2021 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ. ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ಜಯಶಂಕರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ದಾಸರಹಳ್ಳಿ ವಲಯ |
| 3 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 4 | ಶ್ರೀ. ಚನ್ನೇಗೌಡ. ಎಸ್ | ತೋಟಗಾರಿಕೆ ಅಧೀಕ್ಷಕರು, ದಾಸರಹಳ್ಳಿ ವಲಯ |
| 5 | ಶ್ರೀ. ಆದರ್ಶ ಡಿ.ಕೆ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ. ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 7 | ಚೈತ್ರ ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 8 | ಶ್ರೀ. ಮಂಜುನಾಥ್. ಡಿ | ವಾಟರ್ ಇನ್ಸ್‌ಪೆಕ್ಟರ್ |
| 9 | ಶ್ರೀ.ಬಿ.ಟಿ. ಲಕ್ಷ್ಮಿ ವೆಂಕಟೇಶ್ | ಮುನಿಕೊಂಡಪ್ಪ ಬಡಾವಣೆ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 10 | ಶ್ರೀ. ವೇಣುಗೋಪಾಲ್ | ನಾಗರೀಕ ಹಿತ ರಕ್ಷಣಾ ಸಮಿತಿ |
| 11 | ಶ್ರೀ. ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 12 | ಶ್ರೀ. ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 13 | ಶ್ರೀ. ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |
| 14. | ಶ್ರೀ. ರಾಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿನಗರ |
| 15 | ಶ್ರೀ. ಹರೀಶ್ ಕೆ.ಜಿ. | ನಾಗರೀಕ ಹಿತ ರಕ್ಷಣಾ ಸಮಿತಿ, ರಾಯಲ್‌ಎನ್‌ಕ್ಲೇವ್/ಸಿಡೆದಳ್ಳಿ |
| 16 | ಶ್ರೀ. ವೆಂಕಟರಮಣ ಹೊಳ್ಳ | ನಾಗರೀಕ ಹಿತ ರಕ್ಷಣಾ ಸಮಿತಿ, ರಾಯಲ್‌ಎನ್‌ಕ್ಲೇವ್/ಸಿಡೆದಳ್ಳಿ |
| 17 | ಶ್ರೀ. ಅಂಜನಮೂರ್ತಿ | ಮಾರ್ಷಲ್ |
| 18 | ಶ್ರೀ. ಮೋಹನ್‌ಕುಮಾರ್.ಸಿ.ಪಿ | ಮಾರ್ಷಲ್ |
| 19 | ಶ್ರೀಮತಿ. ಸೌಮ್ಯ | ಲಿಂಕ್‌ವರ್ಕರ್, ಘನತ್ಯಾಜ್ಯ ನಿರ್ವಹಣೆ |
| 20 | ಶ್ರೀಮತಿ. ದಾಕ್ಷಾಯಿಣಿ | ಲಿಂಕ್‌ವರ್ಕರ್, ಘನತ್ಯಾಜ್ಯ ನಿರ್ವಹಣೆ |
| 21 | ಶ್ರೀ. ವೆಂಕಟೇಶ್ | ಮೇಲ್ವಿಚಾರಕ, ಘನತ್ಯಾಜ್ಯ ನಿರ್ವಹಣೆ |
| 22 | ಶ್ರೀ. ನರಸಿಂಹಪ್ಪ | ಮೇಲ್ವಿಚಾರಕ, ಘನತ್ಯಾಜ್ಯ ನಿರ್ವಹಣೆ |
| 23 | ಶ್ರೀ. ರವಿ | ಮೇಲ್ವಿಚಾರಕ, ಘನತ್ಯಾಜ್ಯ ನಿರ್ವಹಣೆ |

173

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ನೀರುಸರಬರಾಜು ಮತ್ತು ಒಳಚರಂಡಿ ಸಂಪರ್ಕಕ್ಕಾಗಿ ಮಾಡಿದ ರಸ್ತೆ ಅಗೆತಗಳನ್ನು, ಮ್ಯಾನ್‌ಹೋಲ್/ವಾಟರ್‌ವಾಲ್ವ್‌ಗಳನ್ನು ಸರಿಯಾಗಿ ಮುಚ್ಚದೇ ಇರುವ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಯಿತು. ಮುನಿಕೊಂಡಪ್ಪ ಬಡಾವಣೆಯಲ್ಲಿ ಕುಡಿಯುವ ನೀರು ಸರಿಯಾಗಿ ಸರಬರಾಜಾಗದೇ ಇರುವ ಬಗ್ಗೆ ಸಮಿತಿ ಸದಸ್ಯರು ತಮ್ಮ ಆಕ್ಷೇಪಣೆಯನ್ನು ವ್ಯಕ್ತಪಡಿಸಿದರು.
ಈ ಕುರಿತು ಹಲವಾರು ಬಾರಿ ಸಂಬಂಧಪಟ್ಟವರ ಗಮನಕ್ಕೆ ತಂದಿದ್ದರು ಸಹ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಿಂದ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ತಿಳಿಸಿದರು.
ಈ ಬಗ್ಗೆ ಕೂಡಲೇ ಅಗತ್ಯ ಕ್ರಮ ವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 7343 |
| ಬಿಡುಗಡೆಯಾದ ಪ್ರಕರಣಗಳು | 7194 |
| ಸಕ್ರಿಯ ಪ್ರಕರಣಗಳು | 06 |
| ಮರಣ | 143 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. |

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಲಸಿಕಾ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಕೈಗೊಳ್ಳುತ್ತಿರುವ ಬಗ್ಗೆ, ಈ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಬಗ್ಗೆ ಮನೆ ಮನೆ ಸರ್ವೇ ಕಾರ್ಯವನ್ನು ಕೈಗೊಳ್ಳುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
ಈ ಕುರಿತು ವಾರ್ಡ್ ವ್ಯಾಪ್ತಿಯಲ್ಲಿ ಶೇ. 100ರಷ್ಟು ಲಸಿಕೆ ನೀಡುವ ಗುರಿಯನ್ನು ಸಾಧಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಅಸಮರ್ಪಕವಾಗಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿಯನ್ನು ಕೈಗೊಳ್ಳಲು ಸಾರ್ವಜನಿಕರ ಸಹಭಾಗಿತ್ವದ ಅವಶ್ಯಕತೆ ಇದ್ದು ಈ ಬಗ್ಗೆ ಜಾಗೃತಿ ಮೂಡಿಸಲು ಸಾರ್ವಜನಿಕರೊಂದಿಗೆ ಸಭೆಯನ್ನು ನಡೆಸಿ ಕ್ರಮ ವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ತೋಟಗಾರಿಕೆ:**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ 10 ಉದ್ಯಾನವನಗಳಿದ್ದು, ಗುತ್ತಿಗೆದಾರರ ಮುಖಾಂತರ ನಿರ್ವಹಣೆಯನ್ನು ಮಾಡುತ್ತಿರುವುದಾಗಿ ತೋಟಗಾರಿಕೆ ಅಧೀಕ್ಷಕರು ಸಭೆಯಲ್ಲಿ ತಿಳಿಸಿದರು. ಎಂ.ಇ.ಐ ಬಡಾವಣೆ, ಎಂ.ಎಸ್.ರಾಮಯ್ಯ ಎನ್‌ಕ್ಲೇವ್‌ನಲ್ಲಿರುವ ಉದ್ಯಾನವನಗಳ ನಿರ್ವಹಣೆ ಅಸಮರ್ಪಕವಾಗಿರುವುದಾಗಿ ತಿಳಿಸಿದರು. ಈ ಕುರಿತು ಪರಿಶೀಲಿಸಿ ಅಗತ್ಯ ಕ್ರಮ ವಹಿಸುವಂತೆ ತಿಳಿಸಲಾಯಿತು.

ಕ್ರಮ: ತೋಟಗಾರಿಕೆ ಅಧೀಕ್ಷಕರು, ದಾಸರಹಳ್ಳಿ ವಲಯ

- **ಇತರೆ ವಿಷಯಗಳ ಬಗ್ಗೆ.**

ಬೆಂಗಳೂರು ನಗರದಲ್ಲಿ ಇತ್ತೀಚೆಗೆ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಬಹುತೇಕ ರಸ್ತೆಗಳಲ್ಲಿ ರಸ್ತೆಗುಂಡಿಗಳು ಉಂಟಾಗಿರುವ ಬಗ್ಗೆ, ಮಳೆನೀರು ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಚರ್ಚಿಸಲಾಯಿತು. ವಾರ್ಡ್ ಅಭಿಯಂತರರು ಮಾತನಾಡಿ, ಮಳೆ ಬೀಳುತ್ತಿರುವುದರಿಂದ ತಾತ್ಕಾಲಿಕವಾಗಿ ವೆಟ್‌ಮಿಕ್ಸ್ ಮೆಕಾಡಮ್‌ನಿಂದ ರಸ್ತೆಗುಂಡಿಗಳನ್ನು ಮುಚ್ಚಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದ್ದು, ಮಳೆ ನಿಂತ ನಂತರ ಡಾಂಬರಿನಿಂದ ರಸ್ತೆಗುಂಡಿಗಳನ್ನು ಮುಚ್ಚಿಸಲು ಕ್ರಮವಹಿಸುವುದಾಗಿ, ಚರಂಡಿಗಳಲ್ಲಿ ತುಂಬಿರುವ ಹೂಳನ್ನು ಆದ್ಯತೆಯ ಮೇರೆಗೆ ತೆರವುಗೊಳಿಸಲು ಕ್ರಮ ವಹಿಸುತ್ತಿರುವುದನ್ನು ಸಭೆಯ ಗಮನಕ್ಕೆ ತಂದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

(Signature) 28/11/2021
**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

(Signature) 28/11/2021
**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**<u>ಅಧಿಕಾರಿಗಳ ಮಾಹಿತಿಗಾಗಿ:-</u>**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಛೇರಿ ಪ್ರತಿ.